## 104. ಶಿಕ್ಷಕರಿಗೆ ಗುಡ್‌ನ್ಯೂಸ್: ಕಡ್ಡಾಯ ವರ್ಗಾವಣೆ ಇಲ್ಲ

ಬೆಂಗಳೂರು ಶಿಕ್ಷಕರು ತೀವ್ರವಾಗಿ ವಿರೋಧಿಸಿದ್ದ ಕಡ್ಡಾಯ ವರ್ಗಾವಣೆಯನ್ನು ಕೈ ಬಿಡುವ ಜೊತೆಗೆ ವರ್ಗಾವಣೆಯಲ್ಲಿ 50 ವರ್ಷ ಮೀರಿದ ಶಿಕ್ಷಕಿಯರು ಹಾಗೂ 55 ವರ್ಷ ಮೀರಿದ ಶಿಕ್ಷಕರಿಗೆ ವಿನಾಯಿತಿ ನೀಡುವುದು ಸೇರಿದಂತೆ ಹಲವು ಅಂಶಗಳು ಇರುವ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮ–2020 ಕರಡನ್ನು ಸರ್ಕಾರ ಪ್ರಕಟಿಸಿದೆ. ಕರಡು ಸಂಬಂಧ ಜೂನ್ 25ರ ವರೆಗೆ ಸಾರ್ವಜನಿಕರು ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಹೊಸ ವರ್ಗಾವಣೆ ಕರಡು ನೀತಿಯಲ್ಲಿ ಪ್ರಮುಖವಾಗಿ ಕಡ್ಡಾಯ ವರ್ಗಾವಣೆ ತೆಗೆದುಹಾಕಲಾಗಿದ್ದು, ಸಮಗ್ರ ಹೊಸ ಕಾಯ್ದೆ ಎಂದು ನಾಮಕರಣ ಮಾಡಲಾಗಿದೆ. ಶೇ.20ಕ್ಕಿಂತ ಹೆಚ್ಚಿನ ಖಾಲಿ ಹುದ್ದೆಗಳಿರುವ ತಾಲ್ಲೂಕುಗಳಿಗೆ ಮಾತ್ರ ವರ್ಗಾವಣೆ ಮಾಡಬೇಕು ಎನ್ನುವ ಮಾನದಂಡವನ್ನು ಕೈಬಿಡಲಾಗಿದೆ. ವರ್ಗಾವಣೆಯಲ್ಲಿ 50 ವರ್ಷ ಮೀರಿದ ಶಿಕ್ಷಕಿಯರು ಹಾಗೂ 55 ವರ್ಷ ಮೀರಿದ ಶಿಕ್ಷಕರಿಗೆ ವಿನಾಯಿತಿ ನೀಡಲಾಗಿದೆ. ವಿಶೇಷ ಪ್ರಕರಣಗಳನ್ನು ಶೇ.15ರ ವರ್ಗಾವಣೆ ಮಿತಿಯಿಂದ ಹೊರಗಿಡಲಾಗಿದೆ.

ವರ್ಗಾವಣೆ ಗೊಂದಲ ನಿವಾರಣೆಗಾಗಿ 'ಕುಂದು ಕೊರತೆಯ ನಿವಾರಣಾ' ಅಧಿಕಾರಿ ನೇಮಕಕ್ಕೆ ಪ್ರಸ್ತಾಪಿಸಲಾಗಿದೆ. ಪತಿ–ಪತ್ನಿ ಪ್ರಕರಣದಲ್ಲಿ ಸರ್ಕಾರದ ಸಾಮಾನ್ಯ ವರ್ಗಾವಣೆ ನೀತಿಯಲ್ಲಿರುವಂತೆ ಕೇವಲ ಸರ್ಕಾರಿ, ಖಾಸಗಿ ಹಾಗೂ ಅನುದಾನಿತ ಶಾಲೆಗಳಿಗೆ ಸೀಮಿತಗೊಳಿಸಿ ಉಳಿದ ಪ್ರಕರಣಗಳನ್ನು ಕೈಬಿಡಲಾಗಿದೆ.

ಜನರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಕ್ರೋಢೀಕರಿಸಿ ಬದಲಾವಣೆ ಅವಶ್ಯವಿದ್ದಲ್ಲಿ ಅದನ್ನು ಸೇರಿಸಿ ಅಂತಿಮವಾಗಿ ನಿಯಮ ರೂಪಿಸಲಾಗುತ್ತದೆ. ನಂತರ ಸಚಿವ ಸಂಪುಟದಲ್ಲಿ ಅನುಮತಿ ಪಡೆದು, ಅಧಿಸೂಚನೆ ಪ್ರಕಟಿಸಲಾಗುತ್ತದೆ.

ಆಧಾರ:ಕನ್ನಡಪ್ರಭ, ದಿನಾಂಕ:11.06.2020